# ಸಂವಿಧಾನ ವಿರೋಧಿ ಶಕ್ತಿಗಳಿಂದ ಮನುಸ್ಮೃತಿ ಜಾರಿಗೆ ಹುನ್ನಾರ: ಸಿಎಂ ಎಚ್ಚರಿಕೆ




**ಬೆಂಗಳೂರು:** ಸಂವಿಧಾನ ವಿರೋಧಿ ಶಕ್ತಿಗಳು ಸಂವಿಧಾನವನ್ನು ನಾಶಗೊಳಿಸಿ ಮತ್ತೆ ಮನುಸ್ಮೃತಿ ಜಾರಿಗೆ ಹುನ್ನಾರ ನಡೆಸುತ್ತಿವೆ. ಈ ಬಗ್ಗೆ ಎಚ್ಚರ ಮತ್ತು ಜಾಗೃತಿ ಇರಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನಾಡಿಗೆ ಕರೆ ನೀಡಿದ್ದಾರೆ.

ಸಮಾಜ ಕಲ್ಯಾಣ ಇಲಾಖೆ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನದ ಅಂಗವಾಗಿ ವಿಧಾನಸೌಧದಲ್ಲಿ ಆಯೋಜಿಸಿದ್ದ ಭಾರತದ ಸಂವಿಧಾನ ಪೀಠಿಕೆಯ ಜಾಗತಿಕ ವಾಚನದ ಅಭೂತಪೂರ್ವ ಕಾರ್ಯಕ್ರಮವನ್ನು ಸಂವಿಧಾನ ಪೀಠಿಕೆ ಓದುವ ಮೂಲಕ ಉದ್ಘಾಟಿಸಿ ಮಾತನಾಡಿದರು. ಸಂವಿಧಾನದ ನಾಶ ಮತ್ತು ಮನುಸ್ಮೃತಿಯ ಜಾರಿ ಎಂದರೆ ಶೇ90 ರಷ್ಟು ಭಾರತೀಯರನ್ನು ಮತ್ತೆ ಗುಲಾಮಗಿರಿಗೆ ತಳ್ಳುವುದಾಗಿದೆ. ಇದಕ್ಕಾಗಿ ಬಹಳ ಕುತಂತ್ರಗಳು ನಡೆಯುತ್ತಿವೆ ಎಂದು ಎಚ್ಚರಿಸಿದರು. →P2